# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಮಾನ್ಯ ಸದಸ್ಯರ ಹೆಸರು | : | ಶ್ರೀ ಮಂಜುನಾಥ್ ಭಂಡಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ | : | **2873** |
| ಉತ್ತರಿಸಬೇಕಾದ ದಿನಾಂಕ | : | 30.03.2022 |
| ಉತ್ತರಿಸಬೇಕಾದ ಸಚಿವರು | : | ವಸತಿ ಮತ್ತು ಮೂಲಸೌಲಭ್ಯ ಅಭಿವೃದ್ಧಿ ಸಚಿವರು |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದಲ್ಲಿ ಪ್ರಸ್ತುತ ಚಾಲ್ತಿಯಲ್ಲಿರುವ ವಸತಿ ಯೋಜನೆಗಳು ಯಾವುವು ; ಅವುಗಳ ಮಾನದಂಡಗಳು ಯಾವುವು ; | ರಾಜ್ಯದಲ್ಲಿ ವಸತಿ ರಹಿತರಿಗೆ ವಸತಿ ಸೌಕರ್ಯ ಕಲ್ಪಿಸಲು, ಕೆಳಕಂಡ ಯೋಜನೆಗಳನ್ನು ಅನುಷ್ಠಾನ ಗೊಳಿಸಲಾಗುತ್ತಿದೆ.<br><br>**ರಾಜ್ಯ ಪುರಸ್ಕೃತ ಯೋಜನೆಗಳು :-**<br>1. ಬಸವ ವಸತಿ ಯೋಜನೆ<br>2. ಡಾ. ಬಿ.ಆರ್. ಅಂಬೇಡ್ಕರ್ ವಸತಿ ಯೋಜನೆ (ಗ್ರಾಮೀಣ & ನಗರ)<br>3. ದೇವರಾಜ ಅರಸು ವಸತಿ ಯೋಜನೆ (ಗ್ರಾಮೀಣ & ನಗರ)<br>4. ವಾಜಪೇಯಿ ನಗರ ವಸತಿ ಯೋಜನೆ<br>5. ಮುಖ್ಯ ಮಂತ್ರಿಗಳ ಬಹುಮಹಡಿ ಬೆಂಗಳೂರು ವಸತಿ ಯೋಜನೆ (ಬೆಂಗಳೂರು ನಗರದಲ್ಲಿ ಮಾತ್ರ)<br><br>**ಕೇಂದ್ರ ಪುರಸ್ಕೃತ ಯೋಜನೆಗಳು**:-<br>1. ಪ್ರಧಾನ ಮಂತ್ರಿ ಆವಾಸ್ ಯೋಜನೆ (ಗ್ರಾಮೀಣ)<br>2. ಪ್ರಧಾನ ಮಂತ್ರಿ ಆವಾಸ್ ಯೋಜನೆ (ನಗರ)<br><br>ವಸತಿ ಇಲಾಖೆಯ ವಿವಿಧ ಯೋಜನೆಗಳಡಿ ಹಂಚಿಕೆ ಮಾಡುವ ಮನೆಗಳನ್ನು ಪಡೆಯಲು ನಿಗಧಿಪಡಿಸಿರುವ ಮಾನದಂಡಗಳು ಕೆಳಕಂಡಂತಿದೆ.<br>• ಅರ್ಜಿದಾರರು ಕಡ್ಡಾಯವಾಗಿ ಮಹಿಳೆಯಾಗಿರಬೇಕು (ವಿವಾಹಿತ ಅಥವಾ ಏಕ ಮಹಿಳಾ ಒಡೆತನದ ಗೃಹಿಣಿ). ಮಾಜಿ ಯೋಧರು, ವಿಧುರರು, ಅಂಗವಿಕಲರು ಮತ್ತು ಹಿರಿಯ ನಾಗರಿಕರಾಗಿದ್ದಲ್ಲಿ ಪುರುಷರು ಸಹಾ ಅರ್ಹರಾಗಿರುತ್ತಾರೆ.<br>• ಅರ್ಜಿದಾರರ ಕುಂಟುಂಬವು ಆರ್ಥಿಕವಾಗಿ ಮತ್ತು ಸಾಮಾಜಿಕವಾಗಿ ಹಿಂದುಳಿದಿದ್ದು, ವಾರ್ಷಿಕ ಆದಾಯವು ಗ್ರಾಮೀಣ ಪ್ರದೇಶದವರಾಗಿದ್ದಲ್ಲಿ ರೂ.1,20,000/-ಕ್ಕಿಂತ ಕಡಿಮೆ ಇರಬೇಕು ನಗರ ಪ್ರದೇಶದಲ್ಲಿ ರೂ.2,00,000/-ಕ್ಕಿಂತ ಒಳಗಿರಬೇಕು.<br>• ಅರ್ಜಿದಾರರ ಕುಟುಂಬವು ವಸತಿ ರಹಿತರಾಗಿದ್ದು, ಅರ್ಜಿದಾರರ ಅಥವಾ ಕುಟುಂಬದ ಯಾವುದೇ ಸದಸ್ಯರ ಹೆಸರಿನಲ್ಲಿ ಕರ್ನಾಟಕದ ಯಾವುದೇ ಭಾಗದಲ್ಲಿ ಸ್ವಂತ ಮನೆಯನ್ನು ಹೊಂದಿರಬಾರದು. ಶಿಥಿಲಗೊಂಡ ಮನೆ ಅಥವಾ ಗುಡಿಸಲಿನಲ್ಲಿ ವಾಸಿಸುತ್ತಿರುವವರು ಅರ್ಹರಾಗಿರುತ್ತಾರೆ.<br>• ಅರ್ಜಿದಾರರು ಸ್ವಂತ ನಿವೇಶನ ಹೊಂದಿದ್ದು, ನಿವೇಶನಕ್ಕೆ ಸಂಬಂಧಿಸಿದಂತೆ ಖಾತೆ ಹೊಂದಿರಬೇಕು.<br>• ಬೇರೆ ಯಾವುದೇ ಯೋಜನೆ/ಇಲಾಖೆಯಿಂದ ಈಗಾಗಲೇ ವಸತಿ ಸೌಲಭ್ಯ ಪಡೆದಿರಬಾರದು. |

| | | |
|---|---|---|
| | | • ಪ್ರಧಾನ ಮಂತ್ರಿ ಆವಾಸ್ ಯೋಜನೆ(ಗ್ರಾ)ಯಡಿ ವಸತಿ ಸೌಲಭ್ಯ ಪಡೆಯಲು ಕೇಂದ್ರ ಸರ್ಕಾರದಿಂದ ನೀಡಲಾದ ಸಾಮಾಜಿಕ ಆರ್ಥಿಕ ಮತ್ತು ಜಾತಿಗಣತಿ-2011ರ (Socio-Economic Caste Census – SECC-2011) ಪಟ್ಟಿಯಲ್ಲಿ ಹೆಸರು ಸೇರಿರಬೇಕು.<br>• ಡಾ\|\|ಬಿ.ಆರ್.ಅಂಬೇಡ್ಕರ್ ಆವಾಸ್ ಯೋಜನೆಯಡಿ ವಸತಿ ಸೌಲಭ್ಯ ಪಡೆಯಲು ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟವರ್ಗಕ್ಕೆ ಸೇರಿದವರಾಗಿರಬೇಕು. ಈ ವರ್ಗದ ವಸತಿ ರಹಿತರಿಗೆ ಬೇಡಿಕೆ ಆಧಾರಿತವಾಗಿ ವಸತಿ ಕಲ್ಪಿಸಲಾಗುವುದು.<br><br>ಪ್ರಧಾನ ಮಂತ್ರಿ ಆವಾಸ್ ಯೋಜನೆ(ನಗರ)ರಡಿ ಫಲಾನುಭವಿಗಳನ್ನು ಗುರುತಿಸಲು/ ಆಯ್ಕೆ ಮಾಡುವ ಮಾನದಂಡ ಕೆಳಕಂಡಂತಿದೆ.<br><br>• ಫಲಾನುಭವಿಯು ಬೇಡಿಕೆ ಸಮೀಕ್ಷೆಯಲ್ಲಿರಬೇಕು.<br>• ದೇಶದಾದ್ಯಂತ ಅವನ /ಅವಳ ಹೆಸರಿನಲ್ಲಿ ಯಾವುದೇ ಮನೆ ಇರಬಾರದು.<br>• ಇತರೇ ವಸತಿ ಯೋಜನೆಗಳಲ್ಲಿ ಈಗಾಗಲೇ ಸಹಾಯಧನ ಪಡೆದಿರಬಾರದು.<br>• ಫಲಾನುಭವಿಯು ಸ್ವಂತ ನಿವೇಶನ ಹೊಂದಿರಬೇಕು. |
| ಆ) | ವಸತಿ ಯೋಜನೆಯ ನೋಂದಣಿ ಪ್ರಕ್ರಿಯೆಯಿಂದಾಗಿ ನೈಜ ವಸತಿ ರಹಿತ ಫಲಾನುಭವಿಗಳಿಗೆ ತೊಂದರೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; | ಸರ್ಕಾರದ ಆದೇಶ ಸಂಖ್ಯೆ: ವಇ 2 ಹೆಚ್ಎಹೆಚ್ 2022, ದಿನಾಂಕ: 28.01.2022 ರಲ್ಲಿ ವಿವಿಧ ವಸತಿ ಯೋಜನೆಗಳಡಿಯಲ್ಲಿ ಆಯ್ಕೆಯಾದ ಫಲಾನುಭವಿಗಳು ಸ್ವಂತ ನಿವೇಶನದಲ್ಲಿ ಸಹಾಯಧನ ಪಡೆದು ಮನೆ ನಿರ್ಮಿಸಿ ಕೊಂಡಿರುವ/ ನಿರ್ಮಿಸಿ ಕೊಳ್ಳುವ ಫಲಾನುಭವಿಗಳ ಆಸ್ತಿ/ನಿವೇಶನವನ್ನು ಅಡಮಾನ ನೋಂದಣಿ ಮಾಡುವುದನ್ನು ರದ್ದುಪಡಿಸಿ ಆದೇಶಿಸಲಾಗಿದೆ. |
| ಇ) | ವಸತಿ ಯೋಜನೆಯಲ್ಲಿ ಸಾರ್ವಜನಿಕ ಹಿತ ದೃಷ್ಟಿಯಿಂದ ನೋಂದಣಿ ಮಾಡುವ ಪ್ರಕ್ರಿಯೆಯನ್ನು ಕೈಬಿಡುವ ಉದ್ದೇಶ ಸರ್ಕಾರಕ್ಕಿದೆಯೇ ? | |

ಸಂಖ್ಯೆ :ವಇ 214 ಹೆಚ್ಎಎಂ 2022

(ವಿ. ಸೋಮಣ್ಣ)
ವಸತಿ ಮತ್ತು ಮೂಲಸೌಲಭ್ಯ
ಅಭಿವೃದ್ಧಿ ಸಚಿವರು